# ಕರ್ನಾಟಕ ವಿಧಾನ ಪರಿಷತ್ತು

1 ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 564
2 ಸದಸ್ಯರ ಹೆಸರು : ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
3 ಉತ್ತರಿಸುವ ಸಚಿವರು: : ಉಪಮುಖ್ಯಮಂತ್ರಿಯವರು
4 ಉತ್ತರಿಸುವ ದಿನಾಂಕ: : 19.07.2019.

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಹುಬ್ಬಳ್ಳಿಯ ಕರ್ನಾಟಕ ಕಾನೂನು ವಿಶ್ವವಿದ್ಯಾಲಯದಿಂದ ಪ್ರತಿ ವರ್ಷ ಕಾನೂನು ಪದವಿಯಲ್ಲಿ ತೇರ್ಗಡೆಯಾದ ವಿದ್ಯಾರ್ಥಿಗಳಿಗೆ ಎಷ್ಟು ದಿನಗೊಳಗಾಗಿ ಘಟಿಕೋತ್ಸವ ಪ್ರಮಾಣ ಪತ್ರಗಳನ್ನು ವಿತರಿಸಲಾಗುತ್ತಿದೆ: (ಕಳೆದ 5 ವರ್ಷಗಳ ಅವಧಿಯಲ್ಲಿ ಘಟಿಕೋತ್ಸವ ನಡೆದಿರುವ ಬಗೆಗಿನ ಮಾಹಿತಿಯನ್ನು ಒದಗಿಸುವುದು) | ಹುಬ್ಬಳ್ಳಿಯ ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯದ "Statute Governing Convocations for Conferring Degree and Diploma and Award of Honory Degree" ಶಾಸನದನ್ವಯ ಕಾನೂನು ಪದವಿಯಲ್ಲಿ ತೇರ್ಗಡೆಯಾದ ವಿದ್ಯಾರ್ಥಿಗಳಿಗೆ ಪ್ರತಿ ವರ್ಷವೂ ಘಟಿಕೋತ್ಸವ ಪ್ರಮಾಣ ಪತ್ರಗಳನ್ನು ಒದಗಿಸಬೇಕಾಗಿದ್ದು, ಸಾಮಾನ್ಯವಾಗಿ ಡಿಸೆಂಬರ್ ತಿಂಗಳೊಳಗಾಗಿ ಅಥವಾ ಕುಲಾಧಿಪತಿಯವರು ನಿರ್ದೇಶಿಸಿದ ಸಮಯದಲ್ಲಿ ಘಟಿಕೋತ್ಸವ ಪ್ರಮಾಣ ಪತ್ರಗಳನ್ನು ವಿತರಿಸಲಾಗುತ್ತದೆ.<br>ಕಳೆದ ಐದು ವರ್ಷಗಳ ಅವಧಿಯಲ್ಲಿ ಘಟಿಕೋತ್ಸವ ನಡೆದಿರುವ ಬಗ್ಗೆ ಮಾಹಿತಿಯನ್ನು ಈ ಕೆಳಕಂಡಂತೆ ನೀಡಿದೆ:-<br><br>ಪ್ರಥಮ ಘಟಿಕೋತ್ಸವ ನಡೆದ ದಿನಾಂಕ:22.11.2014<br>ದ್ವಿತೀಯ ಘಟಿಕೋತ್ಸವ ನಡೆದ ದಿನಾಂಕ:17.12.2015<br>ತೃತೀಯ ಘಟಿಕೋತ್ಸವ ನಡೆದ ದಿನಾಂಕ:03.02.2017 |
| ಆ) | ಹುಬ್ಬಳ್ಳಿಯ ಕರ್ನಾಟಕ ಕಾನೂನು ವಿಶ್ವವಿದ್ಯಾಲಯದಿಂದ ಕಾನೂನು ಪದವಿ (ಎಲ್.ಎಲ್.ಬಿ) ಪಡೆದ ವಿದ್ಯಾರ್ಥಿಗಳಿಗೆ ಘಟಿಕೋತ್ಸವ ಪ್ರಮಾಣ ಪತ್ರವನ್ನು 2016-17 ನೇ ಸಾಲಿನಿಂದ ಪ್ರಸ್ತುತ ಇಲ್ಲಿಯವರೆಗೂ ನೀಡದೆ ವಿಳಂಬವಾಗುತ್ತಿರುವುದಕ್ಕೆ ಕಾರಣವೇನು; | ಘಟಿಕೋತ್ಸವವನ್ನು ನಡೆಸಲು ಪ್ರಶಿಕ್ಷಣ ಪರಿಷತ್ತು ಮತ್ತು ಪ್ರಶಾಸನ ಮಂಡಳಿಯು ಅಸ್ತಿತ್ವದಲ್ಲಿರುವುದು ಅವಶ್ಯಕವಾಗಿರುತ್ತದೆ. ದಿನಾಂಕ:24.02.2017 ರಂದು ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯದ ಎರಡನೆಯ ಪ್ರಶಿಕ್ಷಣ ಪರಿಷತ್ತಿನ ಅವಧಿಯು ಮುಕ್ತಾಯಗೊಂಡಿದ್ದು, ದಿನಾಂಕ:15.06.2019ರ ರಾಜ್ಯಪಾಲರ ಸಚಿವಾಲಯದ ಅಧಿಸೂಚನೆ ಸಂಖ್ಯೆ: GS 03 LUM 2017 ರನ್ವಯ ಪ್ರಶಿಕ್ಷಣ ಪರಿಷತ್ತನ್ನು ಮರುರಚನೆ ಮಾಡಲಾಗಿದೆ.<br>ಮುಂದುವರೆದು, ದಿನಾಂಕ:19.05.2019 ರಂದು ಹಾಲಿ ಪ್ರಶಾಸನ ಮಂಡಳಿಯ ಅವಧಿಯು ಮುಕ್ತಾಯಗೊಂಡಿದ್ದು, ವಿಶ್ವವಿದ್ಯಾಲಯದ ಪ್ರಶಾಸನ ಮಂಡಳಿ ಮರುರಚನೆ ಮಾಡಲು ಕ್ರಮಕೈಗೊಳ್ಳಲಾಗುತ್ತಿದೆ. |

| | | |
|---|---|---|
| ಇ) | ಕಾನೂನು ಪದವಿ ಪಡೆದವರಿಗೆ ಘಟಿಕೋತ್ಸವ ಪ್ರಮಾಣ ಪತ್ರ ನೀಡದೆ ವಕೀಲ ವೃತ್ತಿಯನ್ನು ಪ್ರಾರಂಭಿಸಲು ಹಾಗೂ ಸರ್ಕಾರಿ ಕಛೇರಿಗಳಲ್ಲಿ ಬಡ್ತಿ ಪಡೆಯಲು ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಘಟಿಕೋತ್ಸವ ಪ್ರಮಾಣ ಪತ್ರಗಳನ್ನು ಎಷ್ಟು ದಿನಗಳಲ್ಲಿ ನೀಡಲಾಗುವುದು? | ಹೌದು.<br><br>ವಿಶ್ವವಿದ್ಯಾಲಯದ ಪ್ರಶಾಸನ ಮಂಡಳಿ ಮರುರಚನೆ ಮಾಡಲು ಕ್ರಮಕೈಗೊಳ್ಳಲಾಗುತ್ತಿದೆ. ಮುಂದುವರೆದು, ವಿದ್ಯಾರ್ಥಿಗಳ ಹಿತದೃಷ್ಟಿಯನ್ನು ಗಮನದಲ್ಲಿಟ್ಟುಕೊಂಡು ತತ್ಕಾಲದಲ್ಲಿ ಅರ್ಜಿ ಸಲ್ಲಿಸಿ ಘಟಿಕೋತ್ಸವ ಪ್ರಮಾಣ ಪತ್ರಗಳನ್ನು ಪಡೆದುಕೊಳ್ಳಲು ವ್ಯವಸ್ಥೆಯನ್ನು ಕಲ್ಪಿಸಿಕೊಡಲಾಗಿದೆ. ಈಗಾಗಲೇ ಉತ್ತೀರ್ಣಗೊಂಡ ಹಲವಾರು ವಿದ್ಯಾರ್ಥಿಗಳು ತತ್ಕಾಲದಲ್ಲಿ ಘಟಿಕೋತ್ಸವ ಪ್ರಮಾಣ ಪತ್ರಗಳನ್ನು ಪಡೆದುಕೊಂಡಿರುತ್ತಾರೆ. |

ಸಂಖ್ಯೆ: ಲಾ 20 ಹೆಚ್‌ಆರ್‌ಎಮ್ 2019

(ಡಾ॥ ಜಿ. ಪರಮೇಶ್ವರ)
ಉಪ ಮುಖ್ಯಮಂತ್ರಿ